**ಓ ಎಸ್ ನಂ. 180/2019**
**ಪಿ ಡಬ್ಲ್ಯೂ: 01.**

**ದಿ: 13.09.2021 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಎಂ.ಎಸ್. ವಕೀಲರಿಂದಃ**

1. ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಪ್ರಮಾಣಪತ್ರದಲ್ಲಿರುವ ಅಂಶವನ್ನು ನಾನೇ ಹೇಳಿ ಬರೆಸಿ ಸಹಿ ಹಾಕಿರುತ್ತೇನೆ. ಅದರಲ್ಲಿನ ಅಂಶಗಳು ಸತ್ಯವಾಗಿರುತ್ತವೆ. ನ್ಯಾಯಾಲಯದ ಮುಂದೆ ಸಲ್ಲಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ.

2. ನಾನು ವಂಶವೃಕ್ಷ ದೃಡೀಕರಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-01 ಎಂದು ಗುರುತಿಸಲಾಯಿತು. ದಿಃ 03.01.1957 ರ ಮೂಲ ಖರೀದಿ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-02 ಎಂದು ಗುರುತಿಸಲಾಯಿತು. ದಿಃ 24.10.1968 ರ ಮೂಲ ಕ್ರಯಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-03 ಎಂದು ಗುರುತಿಸಲಾಯಿತು. ಎರಡು ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-04 ಮತ್ತು ನಿಪಿ-05 ಎಂದು ಗುರುತಿಸಲಾಯಿತು. ದಾವೆಯನ್ನು ಡಿಕ್ರಿ ಮಾಡಬೇಕೇಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪ್ರತಿವಾದಿಯರ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ, ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ *ಬೆರಳಚ್ಚು ಮಾಡಲಾಯಿತು.*)

ಓ ಹೇ ಕೇ ಸ ಇದೆ

ಅಪರ ಸಿವಿಲ್ ಮತ್ತು ಜೆ ಎಂ ಎಫ್ ಸಿ
ಹೊಸದುರ್ಗ .